# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

************************************************************************************

ಸಂಖ್ಯೆ: w-136/Committee/Proceding -19/2021–22 dt. 03-07-2021

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತರಿಗೊಂಡ ಮಾನ್ಯ ನೋಡಲ್ ಆಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಗಳ ಅನುಷ್ಠನದ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸಭೆಯನ್ನು ಪ್ರಾರಂಭಿಸಲಾಯಿತು

ಅಧ್ಯಕ್ಷರು ಕಂದಾಯ ಪರಿವೀಕ್ಷಕರಿಗೆ ವಾರ್ಡ್ ವ್ಯಾಪ್ತಿಯಲ್ಲಿ ತೆರಿಗೆ ವಸೂಲತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ 5% ತೆರಿಗೆ ವಿನಾಯಿತಿ ಮುಂತದುವುಗಳ ಬಗ್ಗೆ ವಿವರಣೆ ಕೋರಿದರು.

ಕಂದಾಯ ಪರಿವೀಕ್ಷಕರು 5% ತೆರಿಗೆ ವಿನಾಯಿತಿಯನ್ನು ಜೂನ್‌ನಲ್ಲಿ ಮುಕ್ತಯಗೊಂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಅನ್ ಲೈನ್‌ನಲ್ಲಿ ತೆರಿಗೆ ಪಾವತಿಸುತ್ತಿದ್ದು ಹಾಗೂ ವಾಣಿಜ್ಯ ಸಂಕೀರ್ಣ ಹಾಗೂ ದೊಡ್ಡ ಮಟ್ಟದ ತೆರಿಗೆ ಪಾವತಿದಾರರಿಗೆ ಖುದ್ದು ಭೇಟಿ ನೀಡಿ ನೋಟಿಸ್ ನೀಡಿ ತೆರಿಗೆ ಪಡೆಯುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಆರೋಗ್ಯ ಪರಿವೀಕ್ಷಕರು ವಾಡ್–136 ಮತ್ತು ಕಂದಾಯ ಪರಿವೀಕ್ಷರು ವಾರ್ಡ್–136 ರವರುಗಳಿಗೆ ಕೋವಿಡ್–19 ಸೊಂಕಿನ ಬಗ್ಗೆ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

----2

Scanned with CamScanner

ಆರೋಗ್ಯ ಪರಿವೀಕ್ಷಕರು ವಾರ್ಡ್ 136ರ ವ್ಯಾಪ್ತಿಯಲ್ಲಿ ಜೆ.ಜೆ.ಆರ್ ನಗರ ಉದ್ಯಾನವನ ಹಾಗೂ ದೇವರಾಜ್ ಅರಸುನಗರ ಸಮೂದಾಯ ಭವನಗಳಲ್ಲಿ 18 ವರ್ಷ ಮೇಲ್ಪಟ್ಟವರಿಗೆ ಹಾಗೂ 45 ವರ್ಷ ಮೇಲ್ಪಟ್ಟವರಿಗೆ ಪ್ರತಿ ದಿನ ಲಸಿಕೆ ಲಭ್ಯತೆಯಂತೆ ಲಸಿಕೆ ನೀಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ಲಸಿಕೆ ನೀಡುವ ಸ್ಥಳಗಳಲ್ಲಿ ಭೂತ್ ಮಟ್ಟದ ಅಧಿಕಾರಿಗಳನ್ನು ಉಸ್ತುವಾರಿ ನೀಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚು ಕೊಳಚೆ ಪ್ರದೇಶಗಳಿರುವುದರಿಂದ ಸಂಪರ್ಕ ಕಾರ್ಯಕರ್ತೆಯರು ಹಾಗೂ ಸಂಘ ಸಂಸ್ಥೆಗಳ ಉಪಯೋಗ ಪಡೆದುಕೊಂಡು ಲಸಿಕೆ ಪಡೆಯಲು ಜಾಗೃತಿ ಮೂಡಿಸಲು ನಿರ್ಣಯ ಕೈಗೊಳ್ಳಲಾಯಿತು

ಕಮಿಟಿಯ ಸದಸ್ಯರು ಮಳೆಗಾಲದಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ವಿವರಣೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಮುಖ್ಯ ಆಯುಕ್ತರ ಆದೇಶದಂತೆ ಪ್ರತಿ ಉಪ ವಿಭಾಗಕ್ಕೆ ಒಂದು ಟ್ರ್ಯಾಕ್ಟರ್ ಮತ್ತು ಕೂಲಿ ಆಳುಗಳನ್ನು ನಿಯೋಜಿಸಿಕೊಂಡು ಕಾರ್ಯನಿರ್ವಹಿಸಲು ಸೂಚಿಸಿರುವಂತೆ ಜೆಜೆ.ಆರ್ ನಗರ ವಾರ್ಡ್ ಕಛೇರಿಯಲ್ಲಿ ನಿಯಂತ್ರಣ ಕೋಶಡಿಯನ್ನು ಸ್ಥಾಪಿಸಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು

ಅಧ್ಯಕ್ಷರು: ಬಿಡಬ್ಲ್ಯೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು



Scanned with CamScanner

ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಂ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬೆಸ್ಕಂ ಅಧಿಕಾರಿಯವರು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತೀರುವ ಬಿ.ಬಿ.ಎಂ.ಪಿ ಹಾಗೂ ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಹಾಗೂ ಕಸದ ಪಾಯಿಟ್ ಹಾಗೂ ಪ್ರತಿ ದಿನ ಕಸ ವಿಲೇವಾರಿಯ ಬಗ್ಗೆ ಸಭೆ ವಿವರಿಸುವಂತೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ –136ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಇತ್ತಿಚಿಗೆ ಬಂದ ದೂರುಗಳ ವಿವರ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ|| ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | [signature] 13/07/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | [signature] |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ –136 | ಸದಸ್ಯರು | [signature] |

Scanned with CamScanner

8861947288



| | | | |
|---|---|---|---|
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | V. B |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>Kumar Swamy 9060341644 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | |

ಸಹಾಯಕ ಇಂಜಿನಿಯರ್ (ವಿ)
ಕಾ & ಪಾ ಘಟಕ-8.
ಬೆ.ವಿ.ಕಂ., ಪಶ್ಚಿಮ 3ನೇ ಉಪ-ವಿಭಾಗ
ಗೋರಿಪಾಳ್ಯ, ಬೆಂಗಳೂರು-560026

Santhosh Kumar A
**ಕಾರ್ಯದರ್ಶಿಗಳು**
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

**ಅಧ್ಯಕ್ಷರು** 3/7/2021
**ಹಾಗೂ ನೋಡಲ್ ಅಧಿಕಾರಿ**
**ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136**

<u>ಪ್ರತಿಯನ್ನು</u>

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ

Scanned with CamScanner